ಅ) ಹೌದು

ಇ) ಪರಿಶೀಲಿಸಲಾಗುತ್ತಿದೆ.

ಸರ್ಕಾರಿ ಪ್ರೌಢಶಾಲೆಗಳಲ್ಲಿ ಗುಮಾಸ್ತರ ಹುದ್ದೆಗಳ ಮಂಜೂರಾತಿ

4070 (4548) : ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 2001 ರಿಂದ ಹೊಸದಾಗಿ ಮಂಜೂರಾಗಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು; ಈ ಪ್ರೌಢ ಶಾಲೆಗಳಿಗೆ ಗುಮಾಸ್ತರ ಹುದ್ದೆಗಳನ್ನು ಮಂಜೂರು ಮಾಡದಿರುವುದು ನಿಜವೇ;

ಆ) ಪ್ರೌಢಶಾಲೆಗಳಲ್ಲಿ ಗುಮಾಸ್ತರ ಕೆಲಸವನ್ನು ಶಿಕ್ಷಕರಿಂದ ಮಾಡಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

ಇ) ಶಿಕ್ಷಕರು ಗುಮಾಸ್ತರ ಕೆಲಸವನ್ನು ಮಾಡುತ್ತಿರುವುದರಿಂದ ಶಿಕ್ಷಕರ ಕೆಲಸವನ್ನು ಯಾರು ನಿರ್ವಹಿಸುತ್ತಾರೆ; ಇದರಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗುವುದಿಲ್ಲವೆ;

ಈ) ಶೈಕ್ಷಣಿಕ ಪ್ರಗತಿಯ ದೃಷ್ಟಿಯಿಂದ ಈ ಪ್ರೌಢ ಶಾಲೆಗಳಿಗೆ ಸರ್ಕಾರ ಗುಮಾಸ್ತರ ಹುದ್ದೆಗಳನ್ನು ಮಂಜೂರು ಮಾಡುವುದೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) 300 ಸರ್ಕಾರಿ ಪ್ರೌಢಶಾಲೆಗಳು ಮಂಜೂರಾಗಿದೆ.

ಹೌದು

ಆ) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಜ್ಞಾಪನೆ ಸಂಖ್ಯೆ ಸಿ5(1)ಯಸ್ಥ-70/2000-01 ದಿನಾಂಕ: 6.7.2001 ರನ್ವಯ ಕಛೇರಿ ಕೆಲಸಕ್ಕಾಗಿ ಶಿಕ್ಷಕರ ಸೇವೆ ಪಡೆಯುವುದನ್ನು ಕಡ್ಡಾಯವಾಗಿ ನಿಷೇದಿಸಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ ಸಿ3(5) (ಪ್ರಾಶಿ) ನಿಯೋಜಿಸಿ 102/2001-02 ದಿನಾಂಕ: 2.11.2001ರ ಪ್ರಕಾರ ಬೋಧಕೇತರ ಕೆಲಸಕ್ಕೆ ಯಾವುದೇ ಶಿಕ್ಷಕರನ್ನು ನಿಯೋಜಿಸಿಕೊಡಿದ್ದಲ್ಲಿ ಕೂಡಲೇ ಅಂತಹ ಶಿಕ್ಷಕರನ್ನು ಬಿಡುಗಡೆಗೊಳಿಸುವಂತೆ ಸೂಚಿಸಿದೆ.

ಇ) ಬೋಧಕೇತರ ಕೆಲಸ ಕಾರ್ಯಗಳಿಗೆ ಶಿಕ್ಷಕರನ್ನು ನೇಮಿಸಿರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಈ) ಬೋಧಕೇತರ ವೃಂದದ ಹುದ್ದೆಗಳ ಮಂಜೂರಾತಿಗೆ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುತ್ತದೆ.

ಬೆಂಗಳೂರು ನಗರದಲ್ಲಿ ಅಕ್ಷರ ದಾಸೋಹ ಯೋಜನೆ ಅನುಷ್ಠಾನ

4071 (4549) : ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಕ್ಷರ ದಾಸೋಹ ಯೋಜನೆಯನ್ನು ಬೆಂಗಳೂರು ನಗರದ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಜಾರಿಗೊಳಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಎಷ್ಟು ಶಾಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ;

ಆ) ಇಸ್ಕಾನ್ ಸಂಸ್ಥೆಯು ಬೆಂಗಳೂರು ನಗರದಲ್ಲಿ ಎಷ್ಟು ಶಾಲೆಗಳಲ್ಲಿ ಅಕ್ಷಯ ಪಾತ್ರೆ ಯೋಜನೆಯಡಿ ಮಧ್ಯಾಹ್ನ ಉಪಹಾರ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.

ಇ) ಈಗಾಗಲೇ ಉತ್ತಮ ಗುಣಮಟ್ಟದ ಮಧ್ಯಾಹ್ನದ ಉಪಹಾರ ನೀಡುತ್ತಿರುವ ಇಸ್ಕಾನ್‌ನಂತಹ ಮೂಲಕ ಈ ಅಕ್ಷರ ದಾಸೋಹ ಯೋಜನೆಯನ್ನು ಅನುಷ್ಠಾನ ಗೊಳಿಸಲು ಸರ್ಕಾರ ಪರಿಶೀಲನೆ ನಡೆಸುವುದೇ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಅಕ್ಷರ ದಾಸೋಹ ಯೋಜನೆಯನ್ನು ಬೆಂಗಳೂರು ನಗರದ ಸರ್ಕಾರಿ ಶಾಲೆಗಳಲ್ಲಿ ಜಾರಿಗೊಳಿಸುತ್ತಿರುವುದು ನಿಜ.

ನಗರದ 1165 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.

ಆ) ಬೆಂಗಳೂರು ನಗರದಲ್ಲಿ 91 ಶಾಲೆಗಳಿಗೆ ಇಸ್ಕಾನ್ ಸಂಸ್ಥೆಯು ಮಧ್ಯಾಹ್ನ ಉಪಹಾರ ಯೋಜನೆಯನ್ನು ಅನುಷ್ಠಾನಗೊಳಿಸಿಸುತ್ತಿದೆ.

ಇ) ಸಂಘ ಸಂಸ್ಥೆಗಳು ಬಿಸಿ ಊಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಈಗಾಗಲೇ ಸುಮಾರು 10 ದಿನಪತ್ರಿಕೆಗಳಲ್ಲಿ ಪ್ರಕಟಣೆಯನ್ನು ನೀಡಲಾಗಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಹಲವಾರು ಸಂಘ ಸಂಸ್ಥೆಗಳು ಬಿಸಿ ಊಟ ನೀಡಲು ಮುಂದೆ ಬಂದಿವೆ. ಇವುಗಳಲ್ಲಿ ಜೆ.ಎಸ್.ಎಸ್ ಸಂಸ್ಥೆಯಳಂದೂರು, ಇಸ್ಕಾನ್ ಸಂಸ್ಥೆ, ಬೆಂಗಳೂರು ಮತ್ತು ಪಾಲಿಮಾರ್ ಮಠ ಉಡುಪಿ, ಇವರುಗಳು ಕೆಲವು ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಮಕ್ಕಳಿಗೆ ಬಿಸಿ ಊಟವನ್ನು ನೀಡುತ್ತಿದ್ದಾರೆ. ಅದೇ ರೀತಿಯಲ್ಲಿ ಬೇರೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಅವರಿಗೂ ಸಹ ಸರ್ಕಾರ ವಹಿಸಿಕೊಡಲು ಸಿದ್ದವಿದೆ.

ತುಮಕೂರು–ಬಳ್ಳಾರಿ ಹಾಗೂ ಹಾಸನ ಹೆದ್ದಾರಿಗಳಲ್ಲಿ ಮರಣೋತ್ತರ ಪರೀಕ್ಷಾ ಕೇಂದ್ರಗಳು

4072 (4550) : ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಹಾಸನ ಹಾಗೂ ಬಳ್ಳಾರಿ ಹೆದ್ದಾರಿಗಳಲ್ಲಿ ಅಪಘಾತಕ್ಕೀಡಾಗಿ ಮರಣ ಹೊಂದುತ್ತಿರುವವರ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ರೀತಿ ಮರಣ ಹೊಂದಿದವರ ಮರಣೋತ್ತರ ಪರೀಕ್ಷೆಗೆ ಹಾಲಿ ವ್ಯವಸ್ಥೆ ಇರುವ ವಿಕ್ಟೋರಿಯಾ ಹಾಗೂ ಬೋರಿಂಗ್ ಆಸ್ಪತ್ರೆಗಳಲ್ಲಿ 2–3ದಿನ ಕಾಯಬೇಕಾದಂತಹ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ರೀತಿ ಕೇಂದ್ರಿಕೃತ ವ್ಯವಸ್ಥೆಯ ಪರಿಣಾಮದಿಂದ ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಮಲ್ಲೇಶ್ವರಂ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಹೊಸದಾಗಿ ಮರಣೋತ್ತರ ವಿಭಾಗವನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿಲ್ಲ.

ಆ) ವಿಕ್ಟೋರಿಯಾ ಹಾಗೂ ಬೌರಿಂಗ್ ಆಸ್ಪತ್ರೆಗಳಿಗೆ ಅಪಘಾತಕ್ಕೊಳಪಟ್ಟು ಮರಣಹೊಂದಿದ ವ್ಯಕ್ತಿಯ ಶವದೊಡನೆ ಪೊಲೀಸ್ ವರದಿ ಮತ್ತು ಕೋರಿಕೆ ಪತ್ರ ಬಂದ ತಕ್ಷಣವೇ ಶವಪರೀಕ್ಷೆಯನ್ನು